೪. ಶಾಸನ ರಚನೆ

(ಅ) ವಿಧೇಯಕ ಮಂಡನೆ

ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕ, ೨೦೦೧ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಯವರು): ಮಾನ್ಯ ಅಧ್ಯಕ್ಷರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ೩) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.''

ಅಧ್ಯಕ್ಷರು: ಪ್ರಸ್ತಾವ ಏನೆಂದರೆ ''೨೦೦೧ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ.ಕೃಷ್ಣ(ಮುಖ್ಯಮಂತ್ರಿಯವರು): ಮಾನ್ಯ ಅಧ್ಯಕ್ಷರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ''

ಅಧ್ಯಕ್ಷರು: X ವಿಧೇಯಕವನ್ನು ಮಂಡಿಸಲಾಗಿದೆ. X

ಪರ್ಯಾಲೋಚನಾ ಪ್ರಸ್ತಾವ

(ಅ) ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕ, ೨೦೦೧

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್.ಎಂ.ಕೃಷ್ಣ(ಮುಖ್ಯಮಂತ್ರಿಯವರು) ಮಾನ್ಯ ಅಧ್ಯಕ್ಷರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ರಿಂದ ೩ರವರೆಗೆ

ಅಧ್ಯಕ್ಷರು: ''ಖಂಡ ೨ರಿಂದ ೩ರವರೆಗೆ, ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ರಿಂದ ೩ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು')

ಖಂಡ ೧ ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ ''ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವ ಅಂಗೀಕಾರ

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಯವರು) ಮಾನ್ಯ ಅಧ್ಯಕ್ಷರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, ''೨೦೦೧ರ ಕರ್ನಾಟಕ ಧನವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು: ಈಗ ಸದನವನ್ನು ಮಧ್ಯಾಹ್ನ ೩ ಗಂಟೆಯವರೆಗೆ ಮುಂದೂಡುತ್ತಿದ್ದೇನೆ.

ಸದನವು ೧ ಗಂಟೆ ೪೫ ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ಮಧ್ಯಾಹ್ನ ೩ ಗಂಟೆಗೆ ಸಮಾವೇಶಗೊಳ್ಳಲು ತೀರ್ಮಾನಿಸಿತು)

(ಸದನವು ಮಧ್ಯಾಹ್ನ ೩-೧೨ಕ್ಕೆ ಪುನರ್ ಸಮಾವೇಶಗೊಂಡಿತು. ಸನ್ಮಾನ್ಯ ಅಧ್ಯಕ್ಷರು ಅಧ್ಯಕ್ಷ ಪೀಠವನ್ನಲಂಕರಿಸಿದ್ದರು)